## ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.

## ಸಿ.ಸಿ.ನಂ. 1792/2019

| | | |
|---|---|---|
| ಸಾಕ್ಷಿದಾರರ ಹೆಸರು | : | ಕವೀಶ ಕೆ ಎನ್ |
| ತಂದೆಯ ಹೆಸರು | : | ಕೆ ಸಿ ನಾಗಲಿಂಗಪ್ಪ |
| ವಯಸ್ಸು | : | 46 ವರ್ಷ |
| ಉದ್ಯೋಗ | : | ಮುಖ್ಯಪೇದೆ, ಜಯಪುರ ಪೊಲೀಸ್ ಠಾಣೆ |
| ವಾಸಸ್ಥಳ | : | ಮೈಸೂರು. |

**ಸಾಕ್ಷಿಯನ್ನು ದಿನಾಂಕಃ 23.06.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು 2015 ರಿಂದ 2021 ರವರೆಗೆ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 31.03.2019 ರಂದು ರಾತ್ರಿ 8.00 ಗಂಟೆ ಸಮಯದಲ್ಲಿ ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದಾಗ ಪ್ರಾಸಾ-1 ರವರು ಠಾಣೆಗೆ ಹಾಜರಾಗಿ ನಿ.ಪಿ-2 ರಂತೆ ನಿವೇದನೆ ಸಲ್ಲಿಸಿದ್ದು, ನಂತರ ಅದನ್ನು ಪರಿಶೀಲಿಸಿ, ಠಾಣಾ ಮೊಕದ್ದಮೆ ಸಂಖ್ಯೆ 57/2019 ರಂತೆ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿರುತ್ತೇನೆ. ಸಾಕ್ಷಿಯು ನಿ.ಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿ.ಪಿ-2(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿ.ಪಿ-4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ-4(ಎ) ಎಂದು ಗುರುತಿಸಲಾಯಿತು. ತನಿಖೆ ಮುಂದುವರಿಸಿ ನನ್ನ ಮುಂದೆ ಹಾಜರುಪಡಿಸಿದ ಮದ್ಯದ ಟೆಟ್ರಾ ಪ್ಯಾಕೇಟ್ ಗಳನ್ನು ಸ್ವತ್ತು

ಪಟ್ಟಿಗೆ ಅಳವಡಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಆರೋಪಿಯ ವಿರುದ್ಧ ದಸ್ತಗಿರಿ ಕ್ರಮವಹಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಅದೇ ದಿವಸ ಚಾಸಾ-2, 3, 5 ರಿಂದ 7 ರವರ ಹೇಳಿಕೆ ಪಡೆದಿರುತ್ತೇನೆ. ಮದ್ಯದ ಟೆಟ್ರಾ ಪ್ಯಾಕೇಟ್ ಗಳನ್ನು ರಸಾಯನಿಕ ಪರೀಕ್ಷೆಗೆ ಕಳುಹಿಸಿಕೊಟ್ಟು, ದಿನಾಂಕ 24.07.2019 ರಂದು ರಾಸಾಯನಿಕ ವಿಶ್ಲೇಷಣಾ ವರದಿ ಪಡೆದಿರುತ್ತೇನೆ. ಸಾಕ್ಷಿಯು ರಾಸಾಯನಿಕ ವಿಶ್ಲೇಷಣಾ ವರದಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿಪಿ-5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ನಂತರ ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ, ಆರೋಪಿ ಈ ದಿನ ನ್ಯಾಯಾಲಯದಲ್ಲಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎನ್.ಎಸ್, ವಕೀಲರಿಂದಃ**

ನಿಪಿ-2 ನ್ನು ಠಾಣೆಗೆ ಬಂದ ನಂತರ ತಯಾರಿಸಿ ನೀಡಿರುತ್ತಾರೆ. ತನಿಖಾಧಿಕಾರಿಗಳ ಸಹಾಯಕರಿಂದ ನಿವೇದನೆಗಳನ್ನು ತಯಾರಿಸಿರುತ್ತಾರೆ. ಚಾಸಾ-1 ರವರು ಆರೋಪಿಯನ್ನು ಠಾಣೆಗೆ ಹಾಜರುಪಡಿಸಿದ್ದು, ಅವರ ನಿರ್ದೇಶನದ ಮೇರೆಗೆ ಪ್ರಥಮ ವರ್ತಮಾನ ವರದಿ ದಾಖಲಿಸಿರುತ್ತೇನೆ. ಠಾಣೆಗೆ ಮುದ್ದೆ ಮಾಲುಗಳನ್ನಾಗಲಿ ಅಥವಾ ಆರೋಪಿಯನ್ನಾಗಲಿ ಹಾಜರುಪಡಿಸದಿದ್ದರೂ ಠಾಣಾ ಅಂಕಿ-ಅಂಶಗಳಿಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಮದ್ಯದ ಟೆಟ್ರಾ ಪ್ಯಾಕೇಟ್ ಗಳನ್ನು ನನ್ನ ಮುಂದೆ ಹಾಜರುಪಡಿಸಿದಾಗ ನಾನು ಪ್ರತ್ಯೇಕವಾಗಿ ಮಹಜರ್ ಮಾಡಿಲ್ಲ. ಆರೋಪಿ ಯಾವುದೇ ಸ್ವಇಚ್ಛಾ ಹೇಳಿಕೆ ನೀಡಿಲ್ಲ ಮತ್ತು ನಾನು ಆರೋಪಿಯ ಸ್ವಇಚ್ಛಾ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ನನ್ನ ಮುಂದೆ ಯಾವುದೇ ಸಾಕ್ಷಿದಾರರು ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಎಲ್ಲಾ ಟೆಟ್ರಾ ಪ್ಯಾಕೇಟ್ ಗಳನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಿಕೊಟ್ಟಿದ್ದೆ. ಮುದ್ದೆ ಮಾಲುಗಳು ಈ ಪ್ರಕರಣಕ್ಕೆ

ಸಂಬಂಧಪಟ್ಟ ಟೆಟ್ರಾ ಪ್ಯಾಕೇಟ್ ಗಳಾಗಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಸಾಕ್ಷ್ಯಧಾರಗಳು ಲಭ್ಯವಿಲ್ಲದಿದ್ದರೂ ಸುಳ್ಳು ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.**

ಸಹಿ/–

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**

**ನಂಜನಗೂಡು.**